ಶ್ರೀ ಗುರುಜಗನ್ನಾಥವಿಠ್ಠಲ ದಾಸಾರ್ಯ

ವಿರಚಿತ

ಶ್ರೀ ವೆಂಕಟೇಶ ಸ್ತವರಾಜ

ಸಂಗ್ರಹ : ಅರವಿಂದಲೋಚನ

Rarest Archiver

ಶ್ರೀ ವೆಂಕಟೇಶಸ್ತವರಾಜ

ಶ್ರೀರಮಣ ಸರ್ವೇಶ ಸರ್ವಗ
ಸಾರಭೋಕ್ತ ಸ್ವತಂತ್ರ ಸರ್ವದ
ಪಾರಮಹಿಮೋದಾರ ಸದ್ಗುಣಪೂರ್ಣಗಂಭೀರ
ಸಾರಿದರವರಘ ದೂರಗೈಸೀ
ಸೂರಿಜನರಿಗೆ ಸೌಖ್ಯ ನೀಡುವ
ಧೀರವೆಂಕಟರಮಣ ಕರುಣದಿ ಪೊರೆಯೋ ನೀ ಎನ್ನ ॥ ೧ ॥

ಘನ್ನ ಮಹಿಮಾಪನ್ನ ಪಾಲಕ
ನಿನ್ನ ಹೊರತಿನ್ನನ್ಯದೇವರ
ಮನ್ನದಲಿ ನಾ ನೆನಿಸೆನೆಂದಿಗು ಬನ್ನ ಬಡಿಸಿದರು ।
ಎನ್ನ ಪಾಲಕ ನೀನೆ ಇರುತಿರೆ
ಇನ್ನು ಭವಭಯವೇಕೆ ಎನಗೆ
ಚನ್ನ ವೆಂಕಟರಮಣ ಕರುಣದಿ ಪೊರೆಯೊ ನೀ ಎನ್ನ ॥ ೨ ॥

ಲಕುಮಿಬೊಮ್ಮಭವಾಮರೇಶರು
ಭಕುತಿಪೂರ್ವಕ ನಿನ್ನ ಭಜಿಸೀ
ಸಕಲಲೋಕಕೆ ನಾಥರೆನಿಪರೋ ಸರ್ವಕಾಲದಲಿ
ನಿಖಿಳ ಜೀವರಪೊರೆವೊ ದೇವನೆ
ಭಕುತಿ ನೀ ಯೆನಗೀಯದಿರಲು
ವ್ಯಕುತವಾಗ್ಯಪಕೀರ್ತಿ ಬಪ್ಪುದೊ ಶ್ರೀನಿಕೇತನನೆ ॥ ೩ ॥

ಯಾಕೆ ಪುಟ್ಟದೊ ಕರುಣ ಎನ್ನೊಳು
ಸಾಕಲಾರೆಯ ನಿನ್ನ ಶರಣನ

Rarest Archiver

ನೂಕಿಬಿಟ್ಟರೆ ನಿನಗೆ ಲೋಕದಿ ಖ್ಯಾತಿ ಬಪ್ಪುವುದೇ
ನೋಕನೀಯನೆ ನೀನೆ ಎನ್ನನು
ಜೋಕೆಯಿಂದಲಿ ಕಾಯೊ ಬಿಡದೆ
ಏಕದೇವನು ನೀನೆ ವೆಂಕಟಶೇಷಗಿರಿವಾಸ ॥ ೪ ॥

ಅಂಬುಜಾಂಬಕ ನಿನ್ನ ಪದಯುಗ
ನಂಬಿಕೊಂಡೀ ಪರಿಯಲಿರುತಿರೆ
ಡೊಂಬೆಗಾರನ ತೆರದಿ ನೀ ನಿರ್ಭಾಗ್ಯ ಸ್ಥಿತಿತೋರೆ
ಬಿಂಬಮೂರುತಿ ನಿನ್ನ ಕರಗತ
ಕಂಬುವರವೇ ಗತಿಯೊ ವಿಶ್ವ
ಕುಟುಂಬಿ ಎನ್ನನು ಸಲಹೊ ಸಂತತ ಶೇಷಗಿರಿವಾಸ ॥ ೫ ॥

ಸಾರಶಿರಿ ವೈಕುಂಠ ತ್ಯಜಿಸೀ
ಧಾರುಣೀಯೊಳು ಗೊಲ್ಲನಾಗೀ
ಚೋರಕರ್ಮವ ಮಾಡಿ ಬದುಕಿಹದಾರಿಗರಿಕಿಲ್ಲ
ಸಾರಿ ಪೇಳುವೆ ನಿನ್ನ ಗುಣಗಳ
ಪಾರವಾಗಿರುತಿಹವೊ ಜನರಿಗೆ
ಧೀರ ವೆಂಕಟರಮಣ ಕರುಣದಿ ಪೊರೆಯೋ ನೀ ಎನ್ನ ॥ ೬ ॥

ನೀರಮುಳುಗೀ ಭಾರಪೊತ್ತೂ
ಧಾರುಣೀ ತಳವಗಿದು ಸಿಟ್ಟಲಿ
ಕ್ರೂರನುದರವ ಶೀಳಿ ಕರುಳಿನ ಮಾಲೆಧರಿಸಿದರು
ಪೋರವಿಪ್ರಕುಠಾರಿ ವನವನ
ಚಾರಿಗೋಪ ದಿಗಂಬರಾಶ್ವವ
ಏರಿ ಪೋದರು ಬಿಡೆನೊ ವೆಂಕಟಶೇಷಗಿರಿವಾಸ ॥ ೭ ॥

ಲಕ್ಷ್ಮಿನಾಯಕಸಾರ್ವಭೌಮನೆ
ಪಕ್ಷಿವಾಹನ ಪರಮಪುರುಷನೆ
ಮೋಕ್ಷದಾಯಕ ಪ್ರಾಣಜನಕನೆ ವಿಶ್ವವ್ಯಾಪಕನೆ

Rarest Archiver

ಅಕ್ಷಯಾಂಬರ ವಿತ್ತಿವಿಜಯನ
ಪಕ್ಷಪಾತವ ಮಾಡಿ ಕುರುಗಳ
ಲಕ್ಷಮಾಡದೆ ಕೊಂದೆಯೋ ಶ್ರೀಶೇಷಗಿರಿವಾಸ ॥ ೮ ॥

ಹಿಂದೆ ನೀ ಪ್ರಹ್ಲಾದಗೋಸುಗ
ಎಂದುನೋಡದ ರೂಪಧರಿಸೀ
ಬಂದು ದೈತ್ಯನ ಒಡಲಬಗೆದೊ ಪೊರೆದೆ ಬಾಲಕನ
ತಂದೆತಾಯ್ಗಳ ಬಿಟ್ಟು ವಿಪಿನದಿ
ನಿಂದು ತಪಿಸುವ ಪಂಚವತ್ಸರ
ಕಂದನಾಧ್ರುವಗೊಲಿದು ಪೊರೆದೆಯೊ ಶೇಷಗಿರಿವಾಸ ॥ ೯ ॥

ಮಡುವಿನೊಳಗಿಹ ಮಕರಿಕಾಲನು
ಪಿಡಿದು ಬಾಧಿಸೆ ಕರಿಯು ತ್ರಿಜಗ
ದ್ವಡೆಯ ಪಾಲಿಸೊ ಎನಲು ತಕ್ಷಣ ಬಂದು ಪಾಲಿಸಿದೆ
ಮಡದಿ ಮಾತನು ಕೇಳಿಬಲುಪರಿ
ಬಡವ ಬ್ರಾಹ್ಮಣ ಧಾನ್ಯಕೊಡಲು
ಪೊಡವಿಗಸದಳ ಭಾಗ್ಯನೀಡಿದೆ ಶೇಷಗಿರಿವಾಸ ॥ ೧೦ ॥

ಪಿಂತೆ ಮಾಡಿದ ಮಹಿಮೆಗಳ ನಾ
ನೆಂತು ವರ್ಣಿಸಲೇನು ಫಲ ಶ್ರೀ
ಕಾಂತ ಎನ್ನನು ಪೊರೆಯೆ ಕೀರುತಿ ನಿನಗೆ ಫಲವೆನಗೆ
ಕಂತುಜನಕನೆ ಎನ್ನ ಮನಸಿನ
ಅಂತರಂಗದಿ ನೀನೆ ಸರ್ವದ
ನಿಂತು ಪ್ರೇರಣೆ ಮಾಳ್ಪೆ ಸರ್ವದ ಶೇಷಗಿರಿವಾಸ ॥ ೧೧ ॥

ಶ್ರೀನಿವಾಸನೆ ಭಕ್ತಪೋಷನೆ
ಜ್ಞಾನಿ ಕುಲಗಳಿಗಭಯದಾಯಕ
ದೀನಬಾಂಧವ ನೀನೆ ಎನಮನದರ್ಥಪೊರೈಸೊ
ಅನುಪಮೋಪಮಜ್ಞಾನ ಸಂಪದ

Rarest Archive

ವಿನಯಪೂರ್ವಕ ವಿತ್ತು ಪಾಲಿಸೊ
ಜನುಮ ಜನುಮಕೆ ಮರೆಯಬೇಡವೋ ಶೇಷಗಿರಿವಾಸ ॥ ೧೨ ॥

ಮದವು ಮತ್ಸರ ಲೋಭ ಮೋಹವು
ಒದಗಬಾರದು ಎನ್ನ ಮನದಲಿ
ಪದುಮನಾಭನೆ ಜ್ಞಾನಭಕ್ತಿ ವಿರಕ್ತಿ ನೀನಿತ್ತು
ಹೃದಯ ಮಧ್ಯದಿ ನಿನ್ನ ರೂಪವು
ವದನದಲಿ ತವನಾಮ ಮಂತ್ರವು
ಸದಯ ಪಾಲಿಸು ಬೇಡಿಕೊಂಬೆನೊ ಶೇಷಗಿರಿವಾಸ ॥ ೧೩ ॥

ಅಂದನುಡಿಪುಸಿಯಾಗಬಾರದು
ಬಂದ ಭಾಗ್ಯವು ಪೋಗಬಾರದು
ಕುಂದು ಬಾರದೆ ನಿನ್ನ ಕರುಣವು ದಿನದಿ ವರ್ಧಿಸಲಿ
ನಿಂದೆ ಮಾಡುವ ಜನರ ಸಂಗವು
ಎಂದಿಗಾದರು ದೊರೆಯಬಾರದು
ಎಂದು ನಿನ್ನನು ಬೇಡಿಕೊಂಬೆನೊ ಶೇಷಗಿರಿವಾಸ ॥ ೧೪ ॥

ಏನು ಬೇಡಲಿ ಎನ್ನ ದೇವನೆ
ಸಾನುರಾಗದಿ ಎನ್ನ ಪಾಲಿಸೊ
ನಾನವಿಧವಿಧ ಸೌಖ್ಯ ನೀಡುವದಿಹ ಪರಂಗಳಲಿ
ಶ್ರೀನಿವಾಸನೆ ನಿನ್ನ ದಾಸಗೆ
ಏನು ಕೊರತಿಲ್ಲೆಲ್ಲಿ ನೋಡಲು
ನೀನೆ ನಿಂತೀವಿಧದಿ ಪೇಳಿಸು ಶೇಷಗಿರಿವಾಸ ॥ ೧೫ ॥

ಆರು ಮುನಿದವರೇನು ಮಾಳ್ಪರೊ
ಆರು ಒಲಿದವರೇನು ಮಾಳ್ಪರೊ
ಆರು ನೇಹಿಗರಾರು ದ್ವೇಷಿಗಳಾರುದಾಶಿನರು
ಕ್ರೂರ ಜೀವರ ಹಣಿದು ಸಾತ್ವಿಕ

Rarest Archiver

ಧೀರಜೀವರ ಪೊರೆದು ನಿನ್ನಲಿ
ಸಾರಭಕುತಿಯನಿತ್ತು ಪಾಲಿಸೊ ಶೇಷಗಿರಿವಾಸ ॥ ೧೬ ॥

ನಿನ್ನ ಸೇವೆಯನಿತ್ತು ಎನಗೇ
ನಿನ್ನ ಪದಯುಗ ಭಕ್ತಿ ನೀಡಿ
ನಿನ್ನ ಗುಣ ಗಣ ಸ್ತವನ ಮಾಡುವ ಜ್ಞಾನನೀನಿತ್ತು
ಎನ್ನ ಮನದಲಿ ನೀನೆ ನಿಂತೂ
ಘನ್ನ ಕಾರ್ಯವ ಮಾಡಿ ಮಾಡಿಸು
ಧನ್ಯನೆಂದೆನಿಸೆನ್ನ ಲೋಕದಿ ಶೇಷಗಿರಿವಾಸ ॥ ೧೭ ॥

ಜಯ ಜಯತು ಶಠ ಕೂರ್ಮ ರೂಪನೆ
ಜಯ ಜಯತು ಕಿಟ ಸಿಂಹವಾಹನ
ಜಯ ಜಯತು ಭೃಗುರಾಮ ರಘುಕುಲಸೋಮಶ್ರೀರಾಮ
ಜಯ ಜಯತು ಶಿರಿ ಯದುವರೇಣ್ಯನೆ
ಜಯ ಜಯತು ಜನಮೋಹಬುದ್ಧನೆ
ಜಯ ಜಯತು ಕಲಿಕಲ್ಮಷಘ್ನನೆ ಕಲ್ಕಿನಾಮಕನೆ ॥ ೧೮ ॥

ಕರುಣಸಾಗರ ನೀನೆ ನಿಜಪದ
ಶರಣ ವತ್ಸಲ ನೀನೆ ಶಾಶ್ವತ
ಶರಣ ಜನ ಮಂದಾರ ಕಮಲಾಕಾಂತ ಜಯವಂತ
ನಿರುತ ನಿನ್ನನು ನುತಿಸಿ ಪಾಡುವೆ
ವರದ ಗುರು ಜಗನ್ನಾಥ ವಿಠಲ
ಪರಮ ಪ್ರೇಮದಿ ಪೊರೆಯೊ ಎನ್ನನು ಶೇಷಗಿರಿವಾಸ ॥ ೧೯ ॥

❖ ❖ ❖

Rarest Archives

Rarest Archiver